ಕರ್ನಾಟಕ ಸರ್ಕಾರ

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ. ದೇವರಾಜ ಅರಸು ಭವನ,

ಮಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು-52.

ಸಂಖ್ಯೆ: ಹಿಂವಕಇ/ತ-2/ಪ್ರ.ಪು/ಸಿ.ಆರ್-1/2019-20 ದಿನಾಂಕ:17.08.2019.

## <u>ಪ್ರಕಟಣೆ</u>

ವಿಷಯ: 2019-20ನೇ ಸಾಲಿನಲ್ಲಿ "ಡಿ.ದೇವರಾಜ ಅರಸು ಪ್ರತಿಭಾ ಪುಸ್ಕಾರ" (ಎಸ್.ಎಸ್.ಎಲ್.ಸಿ/ದ್ವಿತೀಯ ಪಿ.ಯು.ಸಿ) ಕ್ಕಾಗಿ ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು ಅರ್ಜಿ ಪ್ರತಿ ಮತ್ತು ದಾಖಲೆಗಳ ಪ್ರತಿಗಳನ್ನು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಸಲ್ಲಿಸುವ ಬಗ್ಗೆ.

**********

ಈ ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ 2019-20ನೇ ಸಾಲಿನಲ್ಲಿ "ಡಿ.ದೇವರಾಜ ಅರಸು ಪ್ರತಿಭಾ ಪುಸ್ಕಾರ" (ಎಸ್.ಎಸ್.ಎಲ್.ಸಿ/ದ್ವಿತೀಯ ಪಿ.ಯು.ಸಿ) ಕ್ಕಾಗಿ ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳಿಗೆ ಅರ್ಜಿ ಪ್ರತಿ ಮತ್ತು ದಾಖಲೆಗಳ ಪ್ರತಿಯನ್ನು ಅವರು ವಿದ್ಯಾಭ್ಯಾಸ ಮಾಡಿದ ಶಾಲೆ/ಕಾಲೇಜು ಇರುವ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಯಲ್ಲಿ ದಿನಾಂಕ:31.07.2019ರೊಳಗೆ ಸಲ್ಲಿಸುವಂತೆ ತಿಳಿಸಲಾಗಿತ್ತು, ಆದರೆ ಕೆಲವು ವಿದ್ಯಾರ್ಥಿಗಳು ಇದುವರೆಗೂ ಅರ್ಜಿ ಪ್ರತಿ ಮತ್ತು ದಾಖಲೆಗಳ ಪ್ರತಿಗಳನ್ನು ಸಲ್ಲಿಸಿರುವುದಿಲ್ಲ.

ಆದ್ದರಿಂದ, ವಿದ್ಯಾರ್ಥಿಗಳು ಆನ್-ಲೈನ್ ಮೂಲಕ ಸಲ್ಲಿಸಿರುವ ಅರ್ಜಿಯ ಪ್ರತಿ ಹಾಗೂ ಅಪ್ ಲೋಡ್ ಮಾಡಿರುವ ಎಲ್ಲಾ ದಾಖಲೆಗಳ ಒಂದು ಸೆಟ್ ಪ್ರತಿಯನ್ನು ವಿದ್ಯಾರ್ಥಿಗಳು ಅಧ್ಯಯನ ಮಾಡಿರುವ ಶಾಲಾ/ಕಾಲೇಜುಗಳ ಮುಖ್ಯಸ್ಥರಿಂದ ದೃಢೀಕರಿಸಿ, ಆಯಾ ಶಾಲಾ/ಕಾಲೇಜುಗಳಿರುವ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಸಲ್ಲಿಸಿ, ಮೂಲ ದಾಖಲೆಗಳ ಪರಿಶೀಲನೆ ಮಾಡಿಸಿಕೊಳ್ಳಲು **ಕೊನೆಯ ದಿನಾಂಕ:26.08.2019 ಸಂಜೆ 5.30ಗಂಟೆ ವರೆಗೆ ಕಾಲಾವಕಾಶ ನೀಡಲಾಗಿದೆ.** ನಿಗದಿತ ಸಮಯದಲ್ಲಿ ಅರ್ಜಿ ಪ್ರತಿ ಮತ್ತು ದಾಖಲೆಗಳ ಪ್ರತಿಗಳನ್ನು ಆಯಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಸಲ್ಲಿಸದ ವಿದ್ಯಾರ್ಥಿಗಳ ಅರ್ಜಿಗಳನ್ನು "ಡಿ.ದೇವರಾಜ ಅರಸು ಪ್ರತಿಭಾ ಪುಸ್ಕಾರ" (ಎಸ್.ಎಸ್.ಎಲ್.ಸಿ/ದ್ವಿತೀಯ ಪಿ.ಯು.ಸಿ)ಕ್ಕೆ ಅನರ್ಹವೆಂದು ಪರಿಗಣಿಸಿ, ತಿರಸ್ಕರಿಸಲಾಗುವುದೆಂದು ಈ ಮೂಲಕ ತಿಳಿಸಿದೆ.

P [signature] 17/08/19

ಆಯುಕ್ತರು,

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,

ಬೆಂಗಳೂರು